ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೆರಡನೆಯ ಅಧಿವೇಶನ

ಮಂಗಳವಾರ, ದಿನಾಂಕ : 08 ನೇ ಡಿಸೆಂಬರ್, 2020

ಸೂಕ್ತ ಫಲಾನುಭವಿಗಳಿಗೆ ಪಡಿತರ ಒದಗಿಸುವ ಬಗ್ಗೆ

ಶ್ರೀ ಎಸ್.ಎಲ್. ಭೋಜೇಗೌಡ (ಶಿಕ್ಷಕರ ಕ್ಷೇತ್ರ):-

108 (116) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಲಾಕ್ ಡೌನ್ ಸಮಯದಲ್ಲಿ ಬಡ ಮತ್ತು ಮಧ್ಯಮ ವರ್ಗದವರಿಗೆ ಸರ್ಕಾರದ ವತಿಯಿಂದ ಒದಗಿಸಲಾದ ಪಡಿತರವು ಸೂಕ್ತ ಫಲಾನುಭವಿಗಳಿಗೆ ದೊರಕಿದೆಯೇ ;

(ಆ) ಸೂಕ್ತ ಫಲಾನುಭವಿಗಳಿಗೆ ಪಡಿತರವು ಸಿಗದೇ, ದಲ್ಲಾಳಿ ಹಾಗೂ ಪ್ರಭಾವಿಗಳಿಗೆ ಮಾತ್ರ ಹೆಚ್ಚಾಗಿ ಪಡಿತರವು ದೊರಕಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಇದರಲ್ಲಿ ಏನಾದರೂ ಅವ್ಯವಹಾರ ನಡೆದಿದೆಯೇ ; ಹಾಗಿದ್ದಲ್ಲಿ, ಸರ್ಕಾರ ಈ ಬಗ್ಗೆ ಕೈಗೊಂಡ ಕ್ರಮಗಳೇನು ;

(ಈ) ಒಂದು ವೇಳೆ ಸೂಕ್ತ ಫಲಾನುಭವಿಗಳಿಗೆ ಸರಿಯಾದ ರೀತಿಯಲ್ಲಿ ಪಡಿತರವು ದೊರಕಿದ್ದರೆ ಅವರುಗಳ ವಿವರ ನೀಡುವುದು ?